ಬಸವನಬಾಗೇವಾಡಿ ನ್ಯಾಯಾಲಯವನ್ನು ಮೇಲ್ದರ್ಜೆಗೇರಿಸುವುದು

769(1223) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವನ ಬಾಗೇವಾಡಿ ನ್ಯಾಯಾಲಯವನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಆ) ಈ ನ್ಯಾಯಾಲಯದಲ್ಲಿ ಎಷ್ಟು ಜನ ಕೆಲಸ ಮಾಡುತ್ತಿದ್ದಾರೆ?

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

ಅ) ನ್ಯಾಯಾಲಯವನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಇರುವುದಿಲ್ಲ. ಆದರೂ ಇಲ್ಲಿ ಸಿವಿಲ್ ಜಡ್ಜ್ (ಹಿ.ವಿ) ನ್ಯಾಯಾಲಯವನ್ನು ಸ್ಥಾಪಿಸಲು ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಸಿವಿಲ್ ಜಡ್ಜ್ (ಹಿ.ವಿ) ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯದಲ್ಲಿ 38 ಜನ ಕೆಲಸ ಮಾಡುತ್ತಿದ್ದಾರೆ. ಈಗ ಸಿವಿಲ್ ಜಡ್ಜ್ (ಹಿ.ವಿ) ನ್ಯಾಯಾಲಯವನ್ನು ಸ್ಥಾಪಿಸಲು ಉದ್ದೇಶಿಸಿರುವ ನ್ಯಾಯಾಲಯಕ್ಕೆ 43 ಜನ ಸಿಬ್ಬಂದಿ ಇರುತ್ತಾರೆ.

ಬಸವನಬಾಗೇವಾಡಿ ಪಟ್ಟಣಕ್ಕೆ ಕುಡಿಯುವ ನೀರು

770(1224) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವನಬಾಗೇವಾಡಿ ಪಟ್ಟಣದಲ್ಲಿ ಕುಡಿಯುವ ನೀರಿನ ತೊಂದರೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಯಾವ ಕ್ರಮ ಕೈಗೊಳ್ಳಲಾಗುವುದು?

ಇ) ಇದಕ್ಕಾಗಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ?

ಈ) ಕಾಮಗಾರಿ ಪ್ರಾರಂಭಗೊಂಡಿದೆಯೇ ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಯವರು)

ಅ) ಬಂದಿದೆ.

ಆ) ಬಸವನಬಾಗೇವಾಡಿ ಪಟ್ಟಣ ನೀರು ಸರಬರಾಜು ಯೋಜನೆಯನ್ನು ಮಾರ್ಚ್ 2003ರೊಳಗೆ ಚಾಲನೆ ಮಾಡಲಾಗುವುದು.

ಇ) ರೂ. 1150.00 ಲಕ್ಷಗಳು ಬಿಡುಗಡೆಯಾಗಿದ್ದು, ಫೆಬ್ರವರಿ 2003ರ ವರೆಗೆ ಜಲಮಂಡಲಿಯಿಂದ ರೂ. 1275.00 ಲಕ್ಷಗಳು ವೆಚ್ಚ ಮಾಡಲಾಗಿದೆ.

ಈ) ಈ ಯೋಜನೆಯನ್ನು ಫೆಬ್ರವರಿ 1999ರಲ್ಲಿ ಪ್ರಾರಂಭಿಸಲಾಗಿದ್ದು, ಮಾರ್ಚ್ 2003ರ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು.

ಟಿ. ನರಸೀಪುರದಲ್ಲಿ ಸಾರಿಗೆ ಸಂಸ್ಥೆ ಬಸ್ ನಿಲ್ದಾಣ

771(775) ಡಾ।। ಭಾರತಿ ಶಂಕರ್ (ಟಿ. ನರಸೀಪುರ) ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಟಿ. ನರಸೀಪುರದಲ್ಲಿ ರಸ್ತೆ ಸಾರಿಗೆ ಬಸ್ ನಿಲ್ದಾಣ ನಿರ್ಮಿಸಲು ಸರ್ಕಾರದವರಿಗೆ ಪ್ರಸ್ತಾಪ ಬಂದಿದೆಯೆ;

ಅ) ಹಾಗಿದ್ದಲ್ಲಿ ಈ ಬಗ್ಗೆ ಇಲಾಖೆಯು ಕೈಗೊಂಡಿರುವ ಕ್ರಮಗಳೇನು;

ಇ) ಶಾಲಾ ಕಾಲೇಜು ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಮೈಸೂರಿಗೆ ಗ್ರಾಮೀಣ ಹಸಿರು ಬಸ್ಸಿನ ಸೌಲಭ್ಯವನ್ನು ಒದಗಿಸಲಾಗುವುದೇ?

ಶ್ರೀ ರಮಾನಾಥ ರೈ (ಸಾರಿಗೆ ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಶಾಲಾ, ಕಾಲೇಜುಗಳು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ, ಟಿ. ನರಸೀಪುರ ಹಾಗೂ ಮೈಸೂರು ನಡುವೆ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದಿಂದ ಪರವಾನಿಗೆ ಪಡೆದ ನಂತರ ಗ್ರಾಮೀಣ ಸಾರಿಗೆಯನ್ನು ಆರಂಭಿಸಲಾಗುವುದು.

ರಾಜ್ಯದಲ್ಲಿ ಹೋಬಳಿಗೊಂದು ಕೆರೆ ಯೋಜನೆ

772(776) ಶ್ರೀ ಡಾ।। ಭಾರತಿ ಶಂಕರ್ (ಟಿ. ನರಸೀಪುರ) ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹೋಬಳಿಗೊಂದು ಕೆರೆಯಂತಹ ಮಹತ್ವದ ಯೋಜನೆ ಯಾವ ಹಂತದಲ್ಲಿದೆ;

ಆ) ಶಾಶ್ವತ ಬರಪೀಡಿತ ಪ್ರದೇಶವಾದ ನಂಜನಗೂಡು ತಾಲ್ಲೂಕಿನ ತಗಡೂರು ಗ್ರಾಮದ ಕೊಮ್ಮಗೆರೆಯನ್ನು ಯಾವ ಯೋಜನೆಯಲ್ಲಿ ಕೈಗೆತ್ತಿಕೊಳ್ಳಲಾಗುವುದು;

ಇ) ಇದರ ಅಂದಾಜು ವೆಚ್ಚವೆಷ್ಟು; ಅಚ್ಚುಕಟ್ಟು ಎಷ್ಟು;

ಈ) ರೈತ ಕಾಯಕ ಕೆರೆ ಯೋಜನೆಯಲ್ಲಿ ಇದನ್ನು ಕೈಗೆತ್ತಿಕೊಳ್ಳಲು ಸರ್ಕಾರದವರು ಪರಿಶೀಲಿಸುವರೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು)

ಅ) ರೈತ ಕಾಯಕ ಕೆರೆ ಯೋಜನೆಯಡಿಯಲ್ಲಿ ಪ್ರತಿ ಹೋಬಳಿಗೊಂದು ಕೆರೆಯಂತೆ 745 ಕೆರೆಗಳನ್ನು ರೂ. 195 ಕೋಟಿ ವೆಚ್ಚದಲ್ಲಿ ಪುನರುಜ್ಜೀವನಗೊಳಿಸಲು ಅನುಮೋದನೆ ನೀಡಲಾಗಿದೆ. ಪ್ರಾರಂಭಿಕ ಹಂತದಲ್ಲಿ ಪ್ರತಿ ಮತಕ್ಷೇತ್ರದಕ್ಕೆ ಒಂದರಂತೆ 191 ಕೆರೆಗಳನ್ನು ಪುನರುಜ್ಜೀವನಗೊಳಿಸಲು ಮಂಜೂರಾತಿ ನೀಡಲಾಗಿದೆ. ಈ ಪೈಕಿ 138 ಕೆರೆಗಳ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ.

ಆ) ತಡಗೂರು ಕೆರೆ ಅಭಿವೃದ್ಧಿ ಕಾಮಗಾರಿಯು ಮೇಲೆ ತಿಳಿಸಿರುವ 745 ಕೆರೆಗಳಲ್ಲಿ ಒಂದಾಗಿರುತ್ತದೆ. ಆದರೆ ಈ ಕೆರೆಯು ಪ್ರಥಮ ಹಂತದ ಕಾರ್ಯಕ್ರಮದಲ್ಲಿ ಸೇರಿರುವುದಿಲ್ಲ ಆದ್ದರಿಂದ ಸಧ್ಯಕ್ಕೆ ಈಗ ರೂ. 3.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಸದರಿ ಕೆರೆಯ ಹೂಳೆತ್ತುವ ಕಾಮಗಾರಿಯನ್ನು ಬರ ಪರಿಹಾರದ ಕೂಲಿಗಾಗಿ ಕಾಳು ಯೋಜನೆಯಡಿಯಲ್ಲಿ ಕೈಗೊಳ್ಳಲಾಗಿದೆ.

ಇ) ಈ ಕೆರೆಯ ಅಚ್ಚುಕಟ್ಟು ಪ್ರದೇಶವು 43.00 ಹೆಕ್ಟೇರು ಆಗಿದ್ದು, ರೈತ ಕಾಯಕ ಕೆರೆ ಯೋಜನೆಯಡಿಯಲ್ಲಿ ಈ ಕೆರೆಯ ಸಮಗ್ರ ಅಭಿವೃದ್ಧಿ ಕಾಮಗಾರಿಗೆ ರೂ. 614 ಲಕ್ಷಗಳ ಅಂದಾಜು ಮೊತ್ತವನ್ನು ನಿಗದಿಪಡಿಸಲಾಗಿದೆ.

ಈ) ಈ ಕೆರೆಯು ರೈತ ಕಾಯಕ ಕೆರೆ ಯೋಜನೆಯಡಿಯಲ್ಲಿ ಸೇರಿದ್ದು, ಮುಂದಿನ ಹಂತಗಳಲ್ಲಿ ಇದನ್ನು ಕೈಗೆತ್ತಿಕೊಳ್ಳಲಾಗುವುದು.